# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 22(163) |
| ಸದಸ್ಯರ ಹೆಸರು | ಶ್ರೀ. ಸುನೀಲ್ ಸುಬ್ರಮಣಿ .ಎಂ.ಪಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 22.09.2020 |
| ಉತ್ತರಿಸುವವರು | ಮಾನ್ಯ ಪೌರಾಡಳಿತ, ತೋಟಗಾರಿಕೆ ಹಾಗೂ ರೇಷ್ಮೆ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಮಡಿಕೇರಿ ನಗರದಲ್ಲಿ ನಗರಸಭೆ ವತಿಯಿಂದ ಮನೆ-ಮನೆಗಳಿಂದ ಕಸವನ್ನು ಸಂಗ್ರಹಿಸಲಾಗುತ್ತಿದೆಯೇ? | ಹೌದು, ಮಡಿಕೇರಿ ನಗರಸಭೆ ವ್ಯಾಪ್ತಿಯಲ್ಲಿ 8969 ಮನೆಗಳಿದ್ದು, ಘನ ತ್ಯಾಜ್ಯವನ್ನು 6 ಆಟೋ ಟಿಪ್ಪರ್ ಹಾಗೂ 5 ಟ್ರ್ಯಾಕ್ಟರ್‌ಗಳ ಮೂಲಕ ಸಂಗ್ರಹಿಸಲಾಗುತ್ತಿದೆ. |
| ಆ | ಸಂಗ್ರಹಿಸಿದ ಈ ಕಸವನ್ನು ನಗರ ಸಭೆಯು ಯಾವ ಸ್ಥಳದಲ್ಲಿ ಯಾವ ರೀತಿಯಲ್ಲಿ ವಿಲೇವಾರಿ ಮಾಡುತ್ತಿದೆ? (ವಿವರ ನೀಡುವುದು) | ನಗರ ವ್ಯಾಪ್ತಿಯಲ್ಲಿ ಪ್ರತಿದಿನ 20 ಟನ್ ತ್ಯಾಜ್ಯ ಉತ್ಪಾದನೆಯಾಗುತ್ತಿದ್ದು, ಸುಮಾರು 18 ಟನ್ ತ್ಯಾಜ್ಯವನ್ನು ಸಂಗ್ರಹಿಸಲಾಗುತ್ತಿದೆ.<br><br>ಕರ್ಣಂಗೇರಿ ಗ್ರಾಮದ ಸರ್ವೆ ನಂ 471/1 P16 ರಲ್ಲಿ 6 ಎಕರೆ ಜಾಗದಲ್ಲಿ, 9 ಟನ್ ಹಸಿ ತ್ಯಾಜ್ಯವನ್ನು ಕಂಪೋಸ್ಟ್ ಪಿಟ್‌ಗಳಲ್ಲಿ ಸಂಸ್ಕರಿಸಿ, ಟ್ರೋಮೆಲ್ ಸ್ಕ್ರೀನ್ ಮೂಲಕ ಬೇರ್ಪಡಿಸಿ ನಂತರ ಗೊಬ್ಬರವನ್ನು ನಗರಸಭೆ ಉದ್ಯಾನವನ ಹಾಗೂ ಸುತ್ತಮುತ್ತಲಿನ ಎಸ್ಟೇಟ್ ಗಳಿಗೆ ನೀಡಲಾಗುತ್ತಿದೆ.<br><br>ಸುಮಾರು 10-11 ಟನ್ ಒಣ ತ್ಯಾಜ್ಯವನ್ನು ಪ್ರತ್ಯೇಕವಾಗಿಸಿ, ಭಾಗಶಃ ಪ್ಲಾಸ್ಟಿಕ್ ತ್ಯಾಜ್ಯವನ್ನು ಸಣ್ಣ ಪ್ರಮಾಣದಲ್ಲಿ ಬೇಲಿಂಗ್ ಯಂತ್ರದ ಮೂಲಕ ಬೇಲ್ ಮಾಡಿ ಸಂಸ್ಕರಣೆ ಘಟಕದಲ್ಲಿ ಸಂಗ್ರಹಿಸಲಾಗಿರುತ್ತದೆ. ಉಳಿಕೆ ತ್ಯಾಜ್ಯವನ್ನು ತೆರೆದ ಪ್ರದೇಶದಲ್ಲಿ ವಿಲೇ ಮಾಡಲಾಗುತ್ತಿದೆ. |
| ಇ | ಕಸ ವಿಲೇ ಮಾಡುವ ಮೊದಲು ಕಸ ಬೇರ್ಪಡಿಸಲಾಗುತ್ತಿದೆಯೇ? (ವಿವರ ನೀಡುವುದು) | ನಗರಸಭೆಯ 23 ವಾರ್ಡ್‌ಗಳಲ್ಲಿ 17 ವಾರ್ಡ್‌ಗಳಿಂದ ಮೂಲದಲ್ಲಿಯೇ ಕಸವನ್ನು ಬೇರ್ಪಡಿಸಿ ನೀಡಲಾಗುತ್ತಿದೆ. ಇನ್ನುಳಿದ 6 ವಾರ್ಡ್‌ಗಳಲ್ಲಿ ಸಾರ್ವಜನಿಕರಿಗೆ ಕಸವನ್ನು ಬೇರ್ಪಡಿಸಿ ನೀಡುವಂತೆ ಸೂಚಿಸಲಾಗಿರುತ್ತದೆ ಹಾಗು ಈ ಬಗ್ಗೆ NGO ಗಳ ಮೂಲಕ ಐ.ಇ.ಸಿ ಚಟುವಟಿಕೆಗಳನ್ನು ನಿರಂತರವಾಗಿ ಕೈಗೊಳ್ಳಲಾಗುತ್ತಿದೆ. |
| ಈ | ಕಸ ವಿಲೇವಾರಿಯಿಂದ ಸುತ್ತಲಿನ ಪ್ರದೇಶದಲ್ಲಿ ನೈರ್ಮಲ್ಯವನ್ನು ಯಾವ ರೀತಿಯಲ್ಲಿ | ಸಂಸ್ಕರಣೆ ಘಟಕದ ಸುತ್ತಲೂ Compound wall ನಿರ್ಮಿಸಿದ್ದು, ಮರಗಿಡಗಳನ್ನು ಬೆಳೆಸಲಾಗಿರುತ್ತದೆ ಹಾಗು ಯಾವುದೇ ರೀತಿಯ ಕ್ರಿಮಿ ಕೀಟಗಳು ಉತ್ಪತ್ತಿಯಾಗದಂತೆ ಕೀಟನಾಶಕ ಸಿಂಪಡಿಸಿ ಎಚ್ಚರಿಕೆ ವಹಿಸಲಾಗುತ್ತಿದೆ. |

| | |
|---|---|
| ಕಾಪಾಡಲಾಗುತ್ತಿದೆ? | ಘನತ್ಯಾಜ್ಯವನ್ನು ವೈಜ್ಞಾನಿಕವಾಗಿ ಸಂಸ್ಕರಣೆ ಮಾಡಿ, ಸಾರ್ವಜನಿಕರಿಗೆ ಯಾವುದೇ ರೀತಿಯಲ್ಲಿ ತೊಂದರೆ ಉಂಟಾಗದಂತೆ ಕ್ರಮವಹಿಸಲಾಗುತ್ತಿದೆ.<br><br>ಪೌರಾಡಳಿತ ನಿರ್ದೇಶನಾಲಯದ ವತಿಯಿಂದ ಅಧಿಕಾರಿಗಳ ತಂಡವನ್ನು ತ್ಯಾಜ್ಯ ನಿರ್ವಹಣಾ ಘಟಕದ ತಪಾಸಣೆಗೆ ನಿಯೋಜಿಸಲಾಗಿ, ಸದರಿ ತ್ಯಾಜ್ಯ ನಿರ್ವಹಣಾ ಘಟಕದಲ್ಲಿ ಅಂದಾಜು 30,000-40,000 ಟನ್ ಗಳಷ್ಟು ಹಳೆಯ (Legacy) ತ್ಯಾಜ್ಯವು ಶೇಖರಣೆಯಾಗಿದ್ದು, ಸದರಿ ತ್ಯಾಜ್ಯವನ್ನು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ ಮಾನದಂಡಗಳ ಅನುಸಾರ ಹೊರತೆಗೆದು ಬಯೋರೆಮಿಡಿಯೇಷನ್ ಪದ್ಧತಿಯ ಮೂಲಕ ಸಂಸ್ಕರಿಸಿ ವಿಲೇ ಮಾಡಬೇಕಿರುತ್ತದೆ ಎಂದು ಅಭಿಪ್ರಾಯಿಸಲಾಗಿದೆ.<br><br>ಬಗ್ಗೆ ತ್ಯಾಜ್ಯ ನಿರ್ವಹಣೆಗಾಗಿ ವಿಸ್ತೃತ ಯೋಜನಾವರದಿಯನ್ನು ಸಿದ್ಧಪಡಿಸಲು ಸೂಕ್ತ ಏಜೆನ್ಸಿಯನ್ನು ನಿಯಮಾನುಸಾರ ಆಯ್ಕೆ ಮಾಡಿ ಸದರಿಯವರ ಶಿಫಾರಸ್ಸಿನಂತೆ ಅಲ್ಪಾವಧಿ ಹಾಗು ದೀರ್ಘಾವಧಿ ಕ್ರಮಗಳನ್ನು ಅನುಷ್ಠಾನಗೊಳಿಸಲು ಉದ್ದೇಶಿಸಿರುತ್ತದೆ.<br><br>ಈಗಾಗಲೇ ಸಂಗ್ರಹವಾಗಿರುವ ಒಣ ತ್ಯಾಜ್ಯವನ್ನು ಏಕ ಸಮಯದ ಪರಿಹಾರ ಭಾಗವಾಗಿ (one time remediation) ನಿರ್ವಹಿಸಲು ಅಗತ್ಯ ಕ್ರಮವಹಿಸಲಾಗುವುದು.<br><br>ನಗರಸಭೆಯು ನಗರವ್ಯಾಪ್ತಿಯಲ್ಲಿ ಉತ್ಪಾದನೆಯಾಗುವ ಎಲ್ಲಾ ತ್ಯಾಜ್ಯವನ್ನು ಕೇಂದ್ರೀಕೃತ ಘಟಕಕ್ಕೆ ಸಾಗಿಸುವ ಬದಲಾಗಿ ನಗರದಲ್ಲಿಯೇ ವಿಕೇಂದ್ರೀಕೃತ ತ್ಯಾಜ್ಯ ಸಂಸ್ಕರಣಾ ಘಟಕ/ ಒಣ ತ್ಯಾಜ್ಯ ಸಂಗ್ರಹಣಾ ಘಟಕಗಳನ್ನು ಅಭಿವೃದ್ಧಿ ಪಡಿಸಲು ಕ್ರಮ ಕೈಗೊಳ್ಳಲಾಗುವುದು.<br><br>ಸ್ವಚ್ಛ ಭಾರತ ಮಿಷನ್‌ನ ಅಡಿಯಲ್ಲಿ ನಗರಸಭೆಗೆ ಬಿಡುಗಡೆಯಾಗಿರುವ ಮೊತ್ತದಿಂದ ಸ್ಯಾನಿಟರಿ ಲ್ಯಾಂಡ್‌ಫಿಲ್ ಸೌಲಭ್ಯ ಹಾಗು ಇತರ ಅಗತ್ಯ ಸೌಲಭ್ಯಗಳನ್ನು ಅಭಿವೃದ್ಧಿ ಪಡಿಸಲು ಕ್ರಮವಹಿಸಲಾಗುವುದು. |

ಕಡತ ಸಂಖ್ಯೆ: ನಅಇ 91 ಜಿಇಎಲ್ 2020

(ಡಾ|| ನಾರಾಯಣಗೌಡ)
**ಡಾ. ನಾರಾಯಣ ಗೌಡ**
**ಪೌರಾಡಳಿತ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು**